**ಸಾಕ್ಷಿಯನ್ನು ದಿಃ 13.12.2024 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು, ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು, ಸ್ಥಳ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು, ಕಚ್ಚಾ ನಕ್ಷೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು, ಐಎಂವಿ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 5 ಎಂದು, ಎರಡು ಗಾಯದ ಪ್ರಮಾಣ ಪತ್ರಗಳ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 6 ಎಂದು, ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 7 ಎಂದು, 14 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 8 ಎಂದು, 12 ಸಲಹಾ ಚೀಟಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 9 ಎಂದು, ಮೂರು ಎಕ್ಸರೇ ಫೀಲಂಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 10 ಎಂದು, ಆಧಾರ್ ಕಾರ್ಡ್, ಪಾನ್ ಕಾರ್ಡ್ ನ ನೋಟರಿಕೃತ ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ. 11 ಮತ್ತು ನಿಪಿ. 12 ಎಂದು, ಎರಡು ಡಿ.ಎಲ್ ನ ನೋಟರಿಕೃತ ದಾಖಲೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 13 ಎಂದು, ಆರ್.ಸಿ. ಕಾರ್ಡ್ ನ ನೋಟರಿಕೃತ ದಾಖಲೆ ಹಾಜರು ಪಡಿಸಿದ್ದು ಅದನ್ನು ನಿಪಿ. 14 ಎಂದು ಗುರುತಿಸಲಾಯಿತು.

(ನಿಪಿ. 11, 12 ಮತ್ತು ನಿಪಿ. 13 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ನೀಡಲಾಯಿತು)

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.